ಕರ್ನಾಟಕ ಸರ್ಕಾರ

ಜಿಲ್ಲಾ ಪಂಚಾಯತ್ ರಾಮನಗರ

(ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)

ಸಂಖ್ಯೆ: ಉನಿರಾ/ಮಮಅ/ಅಂಕಾಸಆಯ್ಕೆ/Online/2017-18

ಉಪನಿರ್ದೇಶಕರ ಕಛೇರಿ
ಪಂಚಾಯತ್ ಭವನ, 2ನೇ ಮಹಡಿ
ಬಿ.ಎಂ ರಸ್ತೆ, ರಾಮನಗರ ಜಿಲ್ಲೆ,
ದಿನಾಂಕ: 20-02-2018

ಗೆ,
ಹಿರಿಯ ಸಹಾಯಕ ನಿರ್ದೇಶಕರು
ವಾರ್ತಾ ಮತ್ತು ಪ್ರಚಾರ ಇಲಾಖೆ,
ರಾಮನಗರ ಜಿಲ್ಲೆ, ರಾಮನಗರ.

ಮಾನ್ಯರೆ,

ವಿಷಯ: ರಾಮನಗರ ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಿದ್ದು, ಈ ಪ್ರಕಟಣೆಯನ್ನು ಜಿಲ್ಲಾ ಮಟ್ಟದ ಪತ್ರಿಕೆಯಲ್ಲಿ ಉಚಿತವಾಗಿ ಪ್ರಕಟಣೆ ಮಾಡಲು ಕೋರಿಕೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಮಮಇ/303/ಐಸಿಡಿ/2017, ದಿನಾಂಕ:23.09.2017.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ರಾಮನಗರ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ 5 ಶಿಶು ಅಭಿವೃದ್ಧಿ ಯೋಜನೆಗಳ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಸ್ಥಳೀಯ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗೆ 18 ರಿಂದ 35 ವರ್ಷದೊಳಗಿನ ಅರ್ಹ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸಲು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಲು ಕನಿಷ್ಠ 4ನೇ ತರಗತಿ ತೇರ್ಗಡೆಯಾಗಿದ್ದು, ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆಯಾಗಿರಬೇಕು. ದಿನಾಂಕ: 23-02-2018 ರಿಂದ 20-03-2018 ಸಂಜೆ 5.30ರವರೆಗೆ ವೆಬ್ ಸೈಟ್ ವಿಳಾಸ http://anganwadirecruit.kar.nic.in ರಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಕಾರ್ಯಕರ್ತೆ ಮತ್ತು ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಆಯಾಯ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯಲ್ಲಿ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆ ಖಾಲಿ ಇರುವ ಅಂಗನವಾಡಿ ಕೇಂದ್ರಗಳ ಪಟ್ಟಿ, ಮೀಸಲಾತಿ ವಿವರದ ಪಟ್ಟಿಯನ್ನು ಈ ಪತ್ರಕ್ಕೆ ಲಗತ್ತಿಸಿ ಸಲ್ಲಿಸುತ್ತಾ, ಈ ಪ್ರಕಟಣೆಯನ್ನು ತಮ್ಮ ಪತ್ರಿಕೆಯಲ್ಲಿ ಉಚಿತವಾಗಿ ಪ್ರಕಟಣೆ ಮಾಡಲು ತಮ್ಮಲ್ಲಿ ಕೋರಿದೆ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ರಾಮನಗರ ಜಿಲ್ಲೆ, ರಾಮನಗರ.

NIC

E Drive AWW/AWH Vacancy